ಇ) ಹೊಸದಾಗಿ ಈ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಏನಾದರೂ ನಿರ್ಬಂಧವನ್ನು ವಿಧಿಸಿದೆಯೆ;

ಈ) ಹಾಗಿದ್ದಲ್ಲಿ ಯಾವಾಗ ಈ ನಿರ್ಬಂಧವನ್ನು ವಿಧಿಸಲಾಗಿದೆ ಹಾಗೂ ಇದಕ್ಕೆ ಕಾರಣಗಳೇನು;

ಉ) ಭಾರತೀಯ ವೈದ್ಯ ಪದ್ಧತಿಯನ್ನು ಜನಪ್ರಿಯಗೊಳಿಸಲು ಸರ್ಕಾರ ಈ ನಿರ್ಬಂಧವನ್ನು ಸಡಿಲಿಸಿ ಅಗತ್ಯವಿರುವ ಕಡೆಗಳಲ್ಲಿ ಈ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡುವುದೇ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ 3 ಸರ್ಕಾರಿ ಆಯುರ್ವೇದ ಕಾಲೇಜುಗಳು ಮತ್ತು 40 ಖಾಸಗಿ ಆಯುರ್ವೇದ ಕಾಲೇಜುಗಳು ಇವೆ ಮತ್ತು ಒಂದು ಸರ್ಕಾರಿ ಹೋಮಿಯೋಪತಿ ಕಾಲೇಜು ಹಾಗೂ 14 ಖಾಸಗಿ ಹೋಮಿಯೋಪತಿ ಕಾಲೇಜುಗಳು ಇವೆ.

ಆ) 1999-2000ನೇ ಸಾಲಿನಲ್ಲಿ ಆಯುರ್ವೇದ ಕಾಲೇಜುಗಳನ್ನು ತೆರೆಯುವ ಬಗ್ಗೆ ಎಂಟು ಅರ್ಜಿಗಳು ಮತ್ತು ಹೋಮಿಯೋಪತಿ ಕಾಲೇಜುಗಳನ್ನು ತೆರೆಯುವ ಬಗ್ಗೆ 3 ಅರ್ಜಿಗಳು ಸರ್ಕಾರಕ್ಕೆ ಬಂದಿದೆ.

ಇ) ಹೌದು.

ಈ) ಈಗಾಗಲೇ ರಾಜ್ಯದಲ್ಲಿ ಆಯುರ್ವೇದ ಮತ್ತು ಹೋಮಿಯೋಪತಿ ಮಹಾವಿದ್ಯಾಲಯಗಳು ಹೆಚ್ಚಾಗಿದ್ದು ಹಾಗೂ ಹೆಚ್ಚಿನ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಕಡಿಮೆ ಪ್ರಮಾಣದಲ್ಲಿ ಇರುವುದರಿಂದ ದಿನಾಂಕ:16.3.99 ರಿಂದ ಜಾರಿಗೆ ಬರುವಂತೆ 3 ವರ್ಷಗಳ ಕಾಲ ಹೊಸದಾಗಿ ಆಯುರ್ವೇದ ಮತ್ತು ಹೋಮಿಯೋಪತಿ ಮಹಾವಿದ್ಯಾಲಯಗಳನ್ನು ಮಂಜೂರು ಮಾಡುವುದರ ಮೇಲೆ ನಿರ್ಬಂಧವನ್ನು ವಿಧಿಸಿರುತ್ತದೆ.

ಉ) ಸದ್ಯಕ್ಕೆ ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

**ಬೆಂಗಳೂರಿನ ಸಂಜಯಗಾಂಧಿ ಆಪಘಾತ ಮತ್ತು ಪುನರ್ವಸತಿ ಸಂಸ್ಥೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸುವುದು**

1997 (2592) ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಬೆಂಗಳೂರಿನ ಸಂಜಯ್‌ಗಾಂಧಿ ಆಪಘಾತ ಮತ್ತು ಪುನರ್ವಸತಿ ಸಂಸ್ಥೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲು ಅವಕಾಶವಿದೆಯೆ;

ಆ) ಹಾಗಿದ್ದಲ್ಲಿ, ಮರಣೋತ್ತರ ಪರೀಕ್ಷೆಗಾಗಿ ಬೌರಿಂಗ್ ಅಥವಾ ವಿಕ್ಟೋರಿಯಾ ಆಸ್ಪತ್ರೆಗೆ ಮೃತಪಟ್ಟವರ ದೇಹಗಳನ್ನು ಕಳುಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಡಾ: ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸದ್ಯಕ್ಕೆ ಮರಣೋತ್ತರ ಪರೀಕ್ಷೆ ಮಾಡುವ ಸೌಲಭ್ಯವಿರುವುದಿಲ್ಲ.

ಆ) ಹೌದು.

**ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ಹೊಸದಾಗಿ ನರ್ಸಿಂಗ್ ಶಾಲೆಗಳನ್ನು ತೆರೆಯಲು ಇರತಕ್ಕ ನಿರ್ಬಂಧವನ್ನು ರದ್ದುಗೊಳಿಸುವುದು**

1998 (2593) ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಸನ್ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹಿಂದಿನ ಸರ್ಕಾರವು ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ಹೊಸದಾಗಿ ನರ್ಸಿಂಗ್ ಶಾಲೆಗಳನ್ನು ಪ್ರಾರಂಭಿಸಲು ನಿರ್ಬಂಧವನ್ನು ವಿಧಿಸಿರುವುದು ನಿಜವಲ್ಲವೆ;

ಆ) ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ನರ್ಸಿಂಗ್ ಶಾಲೆಗಳಿಗೆ ಬೇಡಿಕೆಗಳಿರುವುದರಿಂದ ಕೂಡಲೇ ಈ ನಿರ್ಬಂಧವನ್ನು ರದ್ದುಗೊಳಿಸಿ, ಹೊಸದಾಗಿ ನರ್ಸಿಂಗ್ ಶಾಲೆಗಳನ್ನು ತೆರೆಯಲು ಸರ್ಕಾರ ಅನುಮತಿ ನೀಡುತ್ತದೆಯೆ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) - ಇಲ್ಲಾ -

**ಬೆಂಗಳೂರು ನಗರದಲ್ಲಿ ನರ್ಸಿಂಗ್ ಹೋಮ್‌ಗಳಿಂದ ಸರ್ಕಾರಕ್ಕೆ ಬರತಕ್ಕ ವರಮಾನ**

1999 (2594) ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ ಇರುವ ಒಟ್ಟು ಖಾಸಗಿ ನರ್ಸಿಂಗ್ ಹೋಂಗಳ ಸಂಖ್ಯೆ ಎಷ್ಟು;

ಆ) ಈ ಪೈಕಿ ಬೆಂಗಳೂರು ನಗರದಲ್ಲಿರುವ ಖಾಸಗಿ ನರ್ಸಿಂಗ್ ಹೋಂ ಗಳೆಷ್ಟು;

ಇ) ಈ ನರ್ಸಿಂಗ್ ಹೋಂಗಳನ್ನು ತೆರೆಯಲು ಅನುಸರಿಸಬೇಕಾದ ಕ್ರಮಗಳು ಯಾವುವು;

ಈ) ಈ ನರ್ಸಿಂಗ್ ಹೋಂಗಳನ್ನು ತೆರೆಯಲು ಸರ್ಕಾರಕ್ಕೆ ಪಾವತಿ ಮಾಡಬೇಕಾದ ಶುಲ್ಕವೆಷ್ಟು;

ಉ) ಈ ನರ್ಸಿಂಗ್ ಹೋಂಗಳು ಪ್ರತಿ ವರ್ಷ ಲೈಸನ್ಸ್ ನವೀಕರಿಸಲು ಪಾವತಿ ಮಾಡಬೇಕಾದ ಶುಲ್ಕವೆಷ್ಟು;

ಊ) ಪ್ರತಿ ವರ್ಷ ಈ ನರ್ಸಿಂಗ್ ಹೋಂಗಳಿಂದ ಸರ್ಕಾರಕ್ಕೆ ಬರತಕ್ಕ ವರಮಾನ ವೆಷ್ಟು?